# October 2, 2023
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಇಂದು ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಅವರ ಜನ್ಮದಿನ: ಜನ್ಮದಿನದ ಪ್ರಯುಕ್ತ ನಿನ್ನೆ ನಾಡಿನಾದ್ಯಂತ್ಯ ಸ್ವಚ್ಛತಾ ಹೀ ಸೇವಾ ಅಭಿಯಾನಕ್ಕೆ ಚಾಲನೆ.
- ಹಿರಿಯ ನಾಗರಿಕರ ಮಾಸಾಶನ ಹೆಚ್ಚಳ ಕುರಿತು ಪರಿಶೀಲನೆ–ಮುಖ್ಯಮಂತ್ರಿ ಸಿದ್ದರಾಮಯ್ಯ.
- ರೈತರ ಹಿತದೃಷ್ಟಿಯಿಂದ ಕೃಷಿ ವಿಶ್ವವಿದ್ಯಾಲಯಗಳು ಹೆಚ್ಚಿನ ಸಂಶೋಧನೆಗೆ ಮುಂದಾಗಬೇಕು–ಸಚಿವ ಸಂತೋಷ ಲಾಡ.
- ಅರಣ್ಯ ಸಂರಕ್ಷಣೆಯಲ್ಲಿ ರಾಜ್ಯ ಅಗ್ರಸ್ಥಾನದಲ್ಲಿದೆ–ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್.

ಈಗ ವಾರ್ತೆಗಳ ವಿವರ

*******

ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 154 ನೇ ಜನ್ಮದಿನಾಚರಣೆ ಅಂಗವಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ನೀಡಿದ್ದ ಕರೆ ಹಿನ್ನೆಲೆ, ಸ್ವಚ್ಛತಾ ಹೀ ಸೇವಾ' ಅಭಿಯಾನದ ಭಾಗವಾಗಿ ರಾಜ್ಯಾದ್ಯಂತ ನಿನ್ನೆ ಒಂದು ಗಂಟೆ ಸ್ವಚ್ಛತಾ ಕಾರ್ಯ ನಡೆಸಲಾಯಿತು.

ಮಂಡ್ಯದಲ್ಲಿ ಸ್ವಚ್ಛತಾ ಹೀ ಸೇವಾ ಆಂದೋಲಕ್ಕೆ ಜಿಲ್ಲಾಧಿಕಾರಿ ಡಾ.ಕುಮಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸ್ವಚ್ಛತೆ ಎನ್ನುವುದು ಮನಸ್ಸಿಗೆ ಸಂಬಂಧ ಪಟ್ಟ ವಿಷಯ. ಮನಸ್ಸು ಸ್ವಚ್ಛವಾಗಿದ್ದರೆ. ನಮ್ಮ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬಹುದು. ಮನಸ್ಸು ಹಾಗೂ ಪರಿಸರ ಸ್ವಚ್ಛವಾಗಿದ್ದರೆ ದೈಹಿಕವಾಗಿ ಆರೋಗ್ಯವಾಗಿರಬಹುದು ಎಂದರು.

ಮಹಾತ್ಮ ಗಾಂಧಿ ಜಯಂತಿಯ ಮುನ್ನಾದಿನವಾದ ನಿನ್ನೆ ದಾವಣಗೆರೆ ಮಹಾನಗರ ಪಾಲಿಕೆಯಿಂದ 45 ವಾರ್ಡುಗಳಲ್ಲಿ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಲಾಗಿತ್ತು.

ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಪಾಲಿಕೆ ಮೇಯರ್ ವಿನಾಯಕ, ಸ್ವಚ್ಛ ಪರಿಸರ ಗಾಂಧೀಜಿಯವರ ಮಹತ್ವಾಕಾಂಕ್ಷೆಯಾಗಿತ್ತು. ಅವರ ಕನಸನ್ನು ನನಸು ಮಾಡುವ ನಿಟ್ಟಿನಲ್ಲಿ ದಾವಣಗೆರೆ ಮಹಾನಗರ ಪಾಲಿಯಾದ್ಯಂತ ಕಳೆದ ಒಂದು ವಾರದಿಂದ ನಿರಂತರವಾಗಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಂಡು ಬರಲಾಗಿದೆ ಎಂದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ನಿನ್ನೆ ಗಾಂಧಿ ಜಯಂತಿ ಹಿನ್ನಲೆಯಲ್ಲಿ ಕರೆ ನೀಡಿದ್ದ ಸ್ವಚ್ಛತಾ ಹೀ ಸೇವಾ ಅಭಿಯಾನದಡಿ ಶ್ರಮದಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ದೇವನಹಳ್ಳಿಯ ಪುರಸಭೆ ವ್ಯಾಪ್ತಿ, ರೈಲ್ವೆ ನಿಲ್ದಾಣ, ಜಾಲಿಗೆ ಗ್ರಾಮ ಪಂಚಾಯಿತಿಯ ಜಾಲಿಗೆ ಗ್ರಾಮದ ಕೆರೆ ಮತ್ತು ಸುತ್ತಮುತ್ತಲಿನ ಆವರಣ ಮೊದಲಾದ ಕಡೆಗಳಲ್ಲಿ ಶ್ರಮದಾನ ನಡೆಸಲಾಯಿತು.

ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮದ ಭಾಗವಾಗಿ ನಿನ್ನೆ ಚಿಕ್ಕಬಳ್ಳಾಪುರ ತಾಲ್ಲೂಕಿನ ಇತಿಹಾಸ ಪ್ರಸಿದ್ಧ ಪ್ರವಾಸಿ ತಾಣ ರಂಗಸ್ಥಳದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ರಂಗಸ್ಥಳ ದೇವಾಲಯದ ಆವರಣ, ಕಲ್ಯಾಣಿ ಮತ್ತಿತರ ಕಡೆಗಳಲ್ಲಿನ ಪ್ಲಾಸ್ಟಿಕ್ ಸೇರಿದಂತೆ ಹಲವು ತ್ಯಾಜ್ಯಗಳನ್ನು ತೆರವುಗೊಳಿಸಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು.

ಶಿವಮೊಗ್ಗದ ಕೇಂದ್ರ ಸಂವಹನ ಇಲಾಖೆ ವತಿಯಿಂದ ನಗರದ ಚಂದನ ಸಾರ್ವಜನಿಕ ಉದ್ಯಾನವನದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸಿದ್ದರು.

ಸ್ವಚ್ಛಾತಾ ಹೀ ಸೇವಾ ಅಭಿಯಾನಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ್ ಅವರು ನಿನ್ನೆ ನಗರದ ಭೀಷ್ಮ ಕೆರೆ ಆವರಣದಲ್ಲಿ ಚಾಲನೆ ನೀಡಿದರು. ಜಿಲ್ಲೆಯ ಎಲ್ಲಾ ಸಾರ್ವಜನಿಕ ಸ್ಥಳಗಳು, ಶಾಲೆ, ಕಾಲೇಜುಗಳಲ್ಲಿ ಸ್ವಚ್ಛಾತಾ ಆಂದೋಲನ ನಡೆದಿದ್ದು, ಗದಗ ಜಿಲ್ಲೆಯನ್ನು ಕಸ ಮುಕ್ತ ಮಾಡಲು ಎಲ್ಲರ ಸಹಕಾರ ಅಗತ್ಯವಿದೆ ಎಂದರು.

*******

ದೇಶದಲ್ಲಿ 12 ಕೋಟಿಗೂ ಹೆಚ್ಚು ಮನೆಗಳ ಶೌಚಾಲಯ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಅನುದಾನ ನೀಡಿದೆ ಎಂದು ಕೆಂದ್ರ ರೈತ ಕಲ್ಯಾಣ ರಾಜ್ಯ ಸಚಿವೆ ಶೋಭ ಕರಂದ್ಲಾಜೆ ಹೇಳಿದ್ದಾರೆ.

ಚಿಕ್ಕಮಗಳೂರಿನಲ್ಲಿ ನಿನ್ನೆ ಸ್ವಚ್ಛತೆಯೇ ಸೇವೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಮನೆ, ನಮ್ಮ ಗ್ರಾಮ, ನಮ್ಮ ನಗರ ಸ್ವಚ್ಛವಾಗಿರಬೇಕು ಎಂಬ ಕಾರಣಕ್ಕೆ ಕೇಂದ್ರ ಸರ್ಕಾರ ಯೋಜನೆ ರೂಪಿಸಿ,

ಅನುಷ್ಠಾನಗೊಳಿಸಿದೆ. ಪರಿಶಿಷ್ಟ ಜನಾಂಗದವರಿಗೆ 15 ಸಾವಿರ, ಉಳಿದವರಿಗೆ 12 ಸಾವಿರ ಸಹಾಯಧನವನ್ನು ಕೇಂದ್ರ ಸರ್ಕಾರ ನೀಡುತ್ತಿದೆ. ಕಸ ವಿಲೇವಾರಿಗೆ ಕೂಡ ವಿಶೇಷ ಯೋಜನೆಯನ್ನು ಸರ್ಕಾರ ಜಾರಿಗೆ ತಂದಿದೆ ಎಂದರು.

ನಂತರ ಸಚಿವರು ನಗರದ ರೈಲ್ವೆ ನಿಲ್ದಾಣ, ಮಹಾತ್ಮ ಗಾಂಧಿ ಪುತ್ಥಳಿ ಬಳಿ ಸ್ವಚ್ಛತಾ ಕಾರ್ಯದಲ್ಲಿ ಪಾಲ್ಗೊಂಡರು.

*******

ರಾಜ್ಯದಲ್ಲಿ ಹಿರಿಯ ನಾಗರಿಕರಿಗೆ ಸದ್ಯ ನೀಡುತ್ತಿರುವ ಮಾಸಾಶನ ಹೆಚ್ಚಿಸುವ ಕುರಿತು ಪರಿಶೀಲಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ "ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಮತ್ತು ರಾಜ್ಯ ಪ್ರಶಸ್ತಿ ಪುರಸ್ಕೃತ ಹಿರಿಯರ ಸನ್ಮಾನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹಿರಿಯರ ಮೌಲ್ಯಯುತ ಜೀವನ ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ ಎಂದರು.

ಹಿರಿಯರನ್ನು ಗೌರವದಿಂದ ನಡೆಸಿಕೊಳ್ಳುವುದು ಮತ್ತು ಅವರ ಬದುಕಿನ ಮೌಲ್ಯಗಳನ್ನು ನಾವು ಅಳವಡಿಸಿಕೊಳ್ಳುವುದೇ ಹಿರಿಯರಿಗೆ ನಾವು ನೀಡುವ ಗೌರವ. ಹಿರಿಯ ನಾಗರಿಕರ ಸಬಲೀಕರಣಕ್ಕಾಗಿ ಸರ್ಕಾರ ಹಲವಾರು ಜನಪರ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿದೆ. ಮುಂದಿನ ದಿನಗಳಲ್ಲೂ ಹಿರಿಯ ನಾಗರಿಕರಿಗೆ ಹಲವು ಕಾರ್ಯಕ್ರಮಗಳನ್ನು ಜಾರಿಗೆ ತರಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

*******

ರೈತರ ಹಿತದೃಷ್ಟಿಯಿಂದ ಕೃಷಿ ವಿಶ್ವವಿದ್ಯಾಲಯಗಳು ಹೆಚ್ಚಿನ ಸಂಶೋಧನೆಗಳಿಗೆ ಒತ್ತು ನೀಡಬೇಕು ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಹೇಳಿದ್ದಾರೆ.

ಧಾರವಾಡ ಕೃಷಿ ವಿಶ್ವವಿದ್ಯಾಲಯದ 37ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರೈತರು, ಬೆಳೆ ಕ್ಷೇತ್ರ ಮತ್ತು ಉತ್ಪಾದಕತೆ ಕುರಿತು ಜಿಲ್ಲಾವಾರು ನಿಖರ ಮಾಹಿತಿ ಕ್ರೋಡಿಕರಿಸಿ. ವಿಶ್ವವಿದ್ಯಾಲಯಗಳು, ಸುಧಾರಣಾ ಕ್ರಮಗಳನ್ನು ಸರ್ಕಾರಕ್ಕೆ ಸೂಚಿಸಬೇಕು ಎಂದರು.

ಬರುವ ದಿನಗಳಲ್ಲಿ ಪ್ರತಿಯೊಬ್ಬ ರೈತರ ಕುರಿತು ಡಾಟಾ ಬೇಸ್ ಮಾದರಿಯಲ್ಲಿ ಜಿಲ್ಲಾವಾರು ಪ್ರತಿ ಬೆಳೆಯ ಕ್ಷೇತ್ರ ಹಾಗೂ ಉತ್ಪಾದಕತೆಯ ಬಗ್ಗೆ ಮಾಹಿತಿ ಸಂಗ್ರಹಣೆಗೆ ಒತ್ತು ನೀಡಬೇಕು. ಸಣ್ಣ ಹಿಡುವಳಿದಾರರು ಬೆಳೆದ ಉತ್ಪನ್ನಗಳಿಗೆ ಒದಗಿಸಬಹುದಾದ ಮಾರುಕಟ್ಟೆ ಕುರಿತು ಹೆಚ್ಚಿನ ಚಿಂತನೆ ಅಗತ್ಯವಿದ್ದು, ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳು ಹೆಚ್ಚಿನ ಸಂಶೋಧನೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಕರ್ನಾಟಕದಲ್ಲಿ ಅರಣ್ಯ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಅರಣ್ಯ ಸಂರಕ್ಷಣೆಯಲ್ಲಿ ರಾಜ್ಯ ಅಗ್ರಸ್ಥಾನದಲ್ಲಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ.

ಅರಣ್ಯ ಇಲಾಖೆಯಿಂದ ನಿನ್ನೆ ರಾಜಭವನದಲ್ಲಿ ಆಯೋಜಿಸಿದ್ದ 69 ನೇ ವನ್ಯಜೀವಿ ಸಪ್ತಾಹ-2023 ರಡಿ 'ವನ್ಯಜೀವಿಗಳ ಸಂರಕ್ಷಣೆಗಾಗಿ ವಿಂಟೇಜ್ ವಾಹನ ಯಾನ' ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದಲ್ಲಿ ಪರಿಸರ ಸಂರಕ್ಷಣಾ ಕಾಯಿದೆ, ಅರಣ್ಯ ಸಂರಕ್ಷಣಾ ಕಾಯ್ದೆ, ರಾಷ್ಟ್ರೀಯ ವನ್ಯಜೀವಿ ಕ್ರಿಯಾ ಯೋಜನೆ, ಪ್ರಾಜೆಕ್ಟ್ ಹುಲಿ, ರಾಷ್ಟ್ರೀಯ ಉದ್ಯಾನಗಳು ಮತ್ತು ಅಭಯಾರಣ್ಯಗಳು, ಅಲ್ಲದೆ, ಅರಣ್ಯಗಳು ಮತ್ತು ವನ್ಯಜೀವಿಗಳ ರಕ್ಷಣೆಗಾಗಿ ಜೈವಿಕ-ಪ್ರಾದೇಶಿಕ ಮೀಸಲು ಇತ್ಯಾದಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಈ ಯೋಜನೆಗಳಿಂದಾಗಿ ಕೆಲವು ಜಾತಿಗಳ ಮರಗಿಡಗಳನ್ನು ಅಳಿವಿನಂಚಿನಿಂದ ಉಳಿಸಲು ಸಾಧ್ಯವಾಗಿದೆ ಎಂದು ರಾಜ್ಯಪಾಲರು ಹೇಳಿದರು.

*******

ಹವಾಮಾನ ಇಲಾಖೆ ಮುನ್ಸೂಚನೆಯಂತೆ ಉತ್ತರಕನ್ನಡ ಜಿಲ್ಲೆಯಲ್ಲಿ ಇನ್ನು 3 ರಿಂದ 4 ದಿನ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ಈ ಅವಧಿಯಲ್ಲಿ ಯಾವುದೇ ಪ್ರಾಕೃತಿಕ ವಿಕೋಪಗಳು ಉಂಟಾಗದಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ವರ್ಚುವಲ್ ಮೂಲಕ ನಿನ್ನೆ ನಡೆದ ಸಭೆಯಲ್ಲಿ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಿದ ಅವರು, ಸಮುದ್ರ ಪ್ರಕ್ಷುಬ್ಧಗೊಂಡಿರುವ ಕಾರಣ ಮೀನುಗಾರರು ಮೀನುಗಾರಿಕೆಗೆ ತೆರಳದಂತೆ ಅಗತ್ಯ ಮಾಹಿತಿ ತಲುಪಿಸಲು ಸೂಚನೆ ನೀಡಿದರು.

ಮುಂಜಾಗ್ರತೆಯಾಗಿ ಕಾಳಜಿ ಕೇಂದ್ರ ತೆರೆಯಲು ಸ್ಥಳ ಗುರುತಿಸಿಕೊಟ್ಟುಕೊಳ್ಳುವಂತೆ ಹಾಗೂ ಮುಳುಗುಗಾರರು ಹಾಗೂ ದೋಣಿಗಳನ್ನು ಸಿದ್ಧಪಡಿಸಿಟ್ಟುಕೊಳ್ಳಬೇಕು. ಈಗಾಗಲೇ ಅಂಕೋಲ ಮತ್ತು ಹೊನ್ನಾವರದಲ್ಲಿರುವ ಎಸ್.ಡಿ.ಆರ್.ಎಫ್ ತಂಡಗಳಿಗೆ ಅಗತ್ಯ ಬಿದಲ್ಲಿ ತಕ್ಷಣ ನೆರವಿಗೆ ಸಿದ್ಧವಿರುವಂತೆ ಜಿಲ್ಲಾಧಿಕಾರಿ ಸೂಚನೆ ನೀಡಿದರು.

*******

ಕೇಂದ್ರ ಸರ್ಕಾರ ಇತ್ತೀಚೆಗೆ ಜಾರಿಗೆ ತಂದಿರುವ ಪಿಎಂ ವಿಶ್ವಕರ್ಮ ಯೋಜನೆಯಡಿ ವಿವಿಧ ವೃತ್ತಿಪರ ಕುಶಲಕರ್ಮಿಗಳು ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದು ಎಂದು ದಾವಣಗೆರೆ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ರಾಜೇಂದ್ರ ನಾಮದೇವ ಕದಂ ತಿಳಿಸಿದ್ದಾರೆ.

ಬಡಗಿ, ದೋಬಿ, ಕುಲುಮೆ, ಬೀಗ ಮಾಡುವವರು. ಶಿಲ್ಪಿಗಾರರು, ಅಕ್ಕಸಾಲಿಗರು, ಕುಂಬಾರ, ಚಮ್ಮಾರ, ತರಗಾರರು, ಗೊಂಬೆ, ಆಟಿಕೆ ತಯಾರಿಕೆ, ಕ್ಷೌರಿಕ, ಹೂಮಾಲೆ ತಯಾರಕರು, ಬುಟ್ಟಿ, ಚಾಪೆ ಮತ್ತು ಕಸಬರಿಗೆ ತಯಾರಕರು, ಕಲ್ಲುಕುಟಿಗರು, ಟೈಲರ್, ಮೀನು ಬಲೆ ತಯಾರಕರು ಹಾಗೂ ದೋಣಿ ತಯಾರಿಕಾ ಕುಶಲಕರ್ಮಿಗಳು ಯೋಜನೆಯಡಿ ಅರ್ಜಿ ಸಲ್ಲಿಸಲು ಅರ್ಹರಾಗಿದ್ದಾರೆ.

ಆಸಕ್ತರು ಇಲಾಖೆ ಜಾಲತಾಣ pmvishwakarma.gov.in ಮೂಲಕ ಸ್ಥಳೀಯ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೊಂದಾಯಿಸಿ ಯೋಜನೆಯ ಸೌಲಭ್ಯ ಪಡೆದುಕೊಳ್ಳಬಹುದು ಎಂದು ಅವರು ತಿಳಿಸಿದ್ದಾರೆ.

*******

ಕನ್ನಡ ಶಾಲೆಗಳ ಮಕ್ಕಳಲ್ಲಿ ಕನ್ನಡ ಪ್ರಜ್ಞೆ ಬೆಳೆಸುವ ಉದ್ದೇಶದಿಂದ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಪ್ರಕಟವಾಗಿರುವ ಮೌಲ್ಯಯುತ ಪುಸ್ತಕಗಳನ್ನು, ಶಾಲೆಗಳಿಗೆ ಉಚಿತವಾಗಿ ವಿತರಿಸಲು ಕನ್ನಡ ಸಾಹಿತ್ಯ ಪರಿಷತ್ತು ವಿಶೇಷ ಯೋಜನೆ ರೂಪಿಸಿದೆ ಎಂದು ಪರಿಷತ್ ಅಧ್ಯಕ್ಷ ಡಾ. ಮಹೇಶ ಜೋಶಿ ತಿಳಿಸಿದ್ದಾರೆ.

ಯೋಜನೆಯ ಮೊದಲ ಹಂತವಾಗಿ 100 ಶಾಲೆಗಳಿಗೆ ಪರಿಷತ್ತು ಪ್ರಕಟಿಸಿರುವ ಮೌಲ್ಯಯುತ 240 ಪುಸ್ತಕಗಳನ್ನು ವಿತರಿಸಲು ತಿರ್ಮಾನಿಸಲಾಗಿದೆ. ಸಮಸ್ತ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿಸುವ ಹಿನ್ನೆಲೆಯಲ್ಲಿ ಪರಿಷತ್ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ತಿಳಿಸಿದ್ದಾರೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಹಿರಿಯ ನಾಗರಿಕರ ದಿನಾಚರಣೆ ಹಿನ್ನಲೆ, ಧಾರವಾಡ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ನೂರು ವರ್ಷ ದಾಟಿದ ಹಿರಿಯ ಮತದಾರರ ಮನೆಗೆ ತೆರಳಿ, ಅಭಿನಂದನ ಪತ್ರ, ಶಾಲು, ಹಾರ ಮತ್ತು ಫಲ ಪುಷ್ಪ ನೀಡಿ, ಗೌರವಿಸಿದರು.

ರಾಯಚೂರು ಖಾಚಿಗುಡಾ ನಡುವೆ ಮಹೆಬೂಬ್ ನಗರ ಮಾರ್ಗವಾಗಿ ಹೊಸ ಡೆಮೊ ರೈಲು ಅಕ್ಟೋಬರ್ 2 ರಿಂದ ಚಾಲನೆಗೊಳ್ಳಲಿದೆ ಎಂದು ವಲಯ ರೈಲ್ವೆ ಬಳಕೆದಾರರ ಸದಸ್ಯ, ಲೋಕಸಭಾ ಸದಸ್ಯ ರಾಜಾ ಅಮರೇಶ ನಾಯಕ ತಿಳಿಸಿದ್ದಾರೆ.

******